# Akashvani : Bangalore
# Regional Bulletin In Kannada
# 02.04.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 02.04.2026 / 18.40 hrs

***************

ಮುಖ್ಯಾಂಶಗಳು

1. ರಾಜ್ಯದ ಪೊಲೀಸ್ ವ್ಯವಸ್ಥೆ ದೇಶಕ್ಕೆ ಮಾದರಿ – ಗೃಹ ಸಚಿವ ಡಾ ಜಿ ಪರಮೇಶ್ವರ್ ಅಭಿಮತ
2. ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಡಯಾಲಿಸೀಸ್‌ಗೆ ನೆಫ್ರೋಪ್ಲಸ್‌ನ ಕೃತಕ ಬುದ್ಧಿ ಮತ್ತೆ ಆಧಾರಿತ ಮೇಲ್ವಿಚಾರಣಾ ವ್ಯವಸ್ಥೆ
3. ವಿಧಾನಸಭಾ ಉಪಚುನಾವಣೆ; ಅಭ್ಯರ್ಥಿಗಳ ಗೆಲುವಿಗೆ ರಾಜಕೀಯ ಪಕ್ಷಗಳ ಮುಖಂಡರಿಂದ ಬಿರುಸಿನ ಪ್ರಚಾರ
4. ಎರಡು ಲಕ್ಷದ 10 ಸಾವಿರದ 26 ಗಾಲಿ ಉತ್ಪಾದಿಸುವ ಮೂಲಕ ಮೈಲಿಗಲ್ಲು ಸಾಧಿಸಿದ ಯಲಹಂಕ ರೈಲು ಗಾಲಿ ಕಾರ್ಖಾನೆ
5. ಖೇಲೋ ಇಂಡಿಯಾ ಆದಿವಾಸಿ ಕ್ರೀಡಾಕೂಟ – 23 ಚಿನ್ನದ ಪದಕದೊಂದಿಗೆ ರಾಜ್ಯಕ್ಕೆ ಅಗ್ರಸ್ಥಾನ

***************

ರಾಜ್ಯದ ಪೊಲೀಸರು ಶಾಂತಿ ಮತ್ತು ಸೌಹಾರ್ದತೆಯ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನ ಕೋರಮಂಗಲದ ಕೆಎಸ್‌ಆರ್ ಪಿ ಪರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಮತ್ತು ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು , ರಾಜ್ಯದ ಪೊಲೀಸ್ ವ್ಯವಸ್ಥೆ ದೇಶದ ಅತ್ಯುತ್ತಮ ಪೊಲೀಸ್ ವ್ಯವಸ್ಥೆಗಳಲ್ಲಿ ಒಂದಾಗಿ ಮನ್ನಣೆ ಗಳಿಸಿದೆ ಎಂದು ಹೇಳಿದ್ದಾರೆ.

ಇಂಡಿಯಾ ಜಸ್ಟೀಸ್ ವರದಿ ಉಲ್ಲೇಖಿಸಿದ ಅವರು, ರಾಜ್ಯದ ಪೊಲೀಸ್ ವ್ಯವಸ್ಥೆ ನಾಗರಿಕರಿಗೆ ನ್ಯಾಯ ತಲುಪಿಸುವಲ್ಲಿ ದೇಶದಲ್ಲಿ ಮೊದಲ ಸ್ಥಾನದಲ್ಲಿದೆ ಎಂದು ಹೇಳಿದ್ದಾರೆ.

ರಾಯಚೂರು ಜಿಲ್ಲೆಯ ಕವಿತಾಳ ಪೊಲೀಸ್ ಠಾಣೆಯನ್ನು ದೇಶದ ಮೂರನೇ ಅತ್ಯುತ್ತಮ ಪೊಲೀಸ್ ಠಾಣೆ ಎಂದು ಕೇಂದ್ರ ಗೃಹ ಸಚಿವಾಲಯ ಗುರುತಿಸಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕವನ್ನು ಮಾದಕ ದ್ರವ್ಯಮುಕ್ತ ರಾಜ್ಯವನ್ನಾಗಿ ಮಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ದೃಷ್ಟಿಕೋನಕ್ಕೆ ಅನುಗುಣವಾಗಿ, ರಾಜ್ಯದಲ್ಲಿ ಮಾದಕ ದ್ರವ್ಯ ಜಾಲವನ್ನು ಸಂಪೂರ್ಣವಾಗಿ ನಾಶಮಾಡಲು ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ದೇಶದ ಪ್ರಮುಖ ಡಯಾಲಿಸಿಸ್ ಸೇವಾ ಸಂಸ್ಥೆಯಾದ ನೆಫ್ರೋ ಪ್ಲಸ್ ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ಸ್ಮಾರ್ಟ್ ಮೇಲ್ವಿಚಾರಣಾ ವ್ಯವಸ್ಥೆಯನ್ನು ಪರಿಚಯಿಸಿದೆ.

ಈ ಕುರಿತಂತೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಪ್ರತಿಯೊಬ್ಬ ರೋಗಿಗೂ ಉತ್ತಮ ಹಾಗೂ ವಿಶ್ವಾಸಾರ್ಹ ಆರೋಗ್ಯ ಸೇವೆಯನ್ನು ಒದಗಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

ಈ ನವೀನ ವ್ಯವಸ್ಥೆಯ ಮೂಲಕ ಡಯಾಲಿಸಿಸ್ ಸಂದರ್ಭದಲ್ಲಿ ರಕ್ತದ ಒತ್ತಡ, ದ್ರವದ ಹೊರ ಹರಿವು ಮತ್ತು ಇಲೆಕ್ಟ್ರೋಲೈಟ್ ಸಮತೋಲನ ಸೇರಿದಂತೆ ಪ್ರಮುಖ ಚಿಕಿತ್ಸಾ ಅಂಶಗಳನ್ನು ತಕ್ಷಣದ ಅವಧಿಯಲ್ಲಿ ಮೇಲ್ವಿಚಾರಣೆ ಮಾಡಬಹುದು.

ಪ್ರಸ್ತುತ 7 ಡಯಾಲಿಸಿಸ್ ಕೇಂದ್ರಗಳಲ್ಲಿ ಜಾರಿಗೊಂಡಿರುವ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವು ರೋಗಿಯ ಚಿಕಿತ್ಸೆ, ಸುರಕ್ಷತೆ, ತುರ್ತು ಸಿದ್ಧತೆ, ಸೋಂಕು ನಿಯಂತ್ರಣ, ಸ್ವಚ್ಛತೆ ಹಾಗೂ ಕಾರ್ಯ ಕ್ಷಮತೆ ಸೇರಿದಂತೆ 28 ಪ್ರಮುಖ ಅಂಶಗಳನ್ನು ಪರಿಶೀಲಿಸಲಿದೆ.

***************

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅಭ್ಯರ್ಥಿಗಳ ಗೆಲುವಿಗೆ ರಾಜಕೀಯ ಮುಖಂಡರು ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೋಡ್ ಶೋ ನಡೆಸಿ, ಮತಯಾಚಿಸಿದರು.

ಸಚಿವರಾದ ಈಶ್ವರ ಖಂಡ್ರೆ, ಎಸ್.ಎಸ್. ಮಲ್ಲಿಕಾರ್ಜುನ ಸೇರಿದಂತೆ ಹಲವು ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇನ್ನೊಂದೆಡೆ, ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಕ್ಷೇತ್ರದ ವಿವಿಧ ಕಡೆಗಳಲ್ಲಿ ಮಾಜಿ ಮುಖ್ಯಮಂತ್ರಿ

ಡಿ.ವಿ.ಸದಾನಂದ ಗೌಡ, ಡಾ.ಜಿಎಂ.ಸಿದ್ದೇಶ್ವರ್, ಬಿ.ಶ್ರೀರಾಮುಲು, ಎಂ.ಪಿ.ರೇಣುಕಾಚಾರ್ಯ, ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಸೇರಿದಂತೆ ಹಲವರು ಪ್ರಚಾರ ನಡೆಸಿದರು.
ಬಾಗಲಕೋಟೆಯಲ್ಲಿಯೂ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರ ಗೋವಿಂದ ಕಾರಜೋಳ, ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಹಲವು ಮುಖಂಡರು ಮತಯಾಚಿಸಿದರು. ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಸಚಿವ ಸಂತೋಷ್ ಲಾಡ್ ಸೇರಿದಂತೆ ಹಲವು ಮುಖಂಡರು ಪ್ರಚಾರ ನಡೆಸಿದದರು.

***************

ಎರಡು ಲಕ್ಷದ 10 ಸಾವಿರದ 26 ಗಾಲಿ ಉತ್ಪಾದಿಸುವ ಮೂಲಕ ಬೆಂಗಳೂರಿನ ಯಲಹಂಕ ರೈಲು ಗಾಲಿ ಕಾರ್ಖಾನೆ ಮೈಲಿಗಲ್ಲು ಸಾಧಿಸಿದ ಮೈಲಿಗಲ್ಲು ಸಾಧಿಸಿದೆ. ಭಾರತೀಯ ರೈಲ್ವೆಯ ಪ್ರಮುಖ ಘಟಕವಾದ ಯಲಹಂಕ ರೈಲು ಗಾಲಿ ಕಾರ್ಖಾನೆ ಗಾಲಿ ತಯಾರಿಕೆಯಲ್ಲಿ ಪರಿಣತಿ ಹೊಂದಿದೆ.

ಹಿಂದಿನ ವರ್ಷದ ಎರಡು ಲಕ್ಷದ ಒಂದು ಸಾವಿರದ 150 ಗಾಲಿಗಳ ಉತ್ಪಾದನೆಯು, ಪ್ರಸಕ್ತ ವರ್ಷ 2 ಲಕ್ಷದ ಹತ್ತು ಸಾವಿರದ 26 ಗಾಲಿಗಳನ್ನು ತಯಾರಿಸುವ ಮೂಲಕ ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದೆ. ಈ ರೈಲು ಗಾಲಿ ಕಾರ್ಖಾನೆಯ ಥರ್ಮಲ್ ಸ್ಯಾಂಡ್ ರಿಕ್ಲಮೇಶನ್ ಪ್ಲಾಂಟ್‌ನಂತಹ ಪರಿಸರ ಜವಾಬ್ದಾರಿಯುತ ಕ್ರಮಗಳನ್ನು ಜಾರಿಗೆ ತಂದಿದೆ. ಇದು ಮರಳಿನ ಚೇತರಿಕೆ ಮತ್ತು ಮರು ಬಳಕೆಯನ್ನು ಸಕ್ರಿಯಗೊಳಿಸುವುದರೊಂದಿಗೆ ಪರಿಸರದ ಮೇಲಿನ ಪರಿಣಾಮವನ್ನು ಗಮನಾರ್ಹವಾಗಿ ಕಡಿಮೆ ಮಾಡಲಿದೆ.

***************

ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೊಳಿಸಲು ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.
ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ಗುತ್ತಿಗೆದಾರರಿಗೆ ಸುಮಾರು 29 ಸಾವಿರ ಕೋಟಿ ರೂಪಾಯಿಗಳ ಬಿಲ್ ಬಾಕಿ ಉಳಿಸಲಾಗಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 24 ಸಾವಿರ ಕೋಟಿ ರೂಪಾಯಿ ಪಾವತಿಸಿದೆ. ಸುಳ್ಳು ಆರೋಪ ಮಾಡುವುದನ್ನೇ ಕಾಯಕ ಮಾಡಿಕೊಂಡಿರುವ ಪ್ರತಿಪಕ್ಷಗಳಿಗೆ ಅಂಕಿ ಅಂಶಗಳೇ ಉತ್ತರ ನೀಡಲಿವೆ ಎಂದು ಹೇಳಿದ್ದಾರೆ.
ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳ ಭರ್ತಿ ಕುರಿತು ಪ್ರತಿಕ್ರಿಯಿಸಿದ ಅವರು, ಈ ವರ್ಷ ಒಟ್ಟು 56 ಸಾವಿರದ 432 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಕೈಗೆತ್ತಿಕೊಳ್ಳಲಾಗುವುದು. ಹಂತ-ಹಂತವಾಗಿ ಎಲ್ಲಾ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಆಡಳಿತ ಯಂತ್ರಕ್ಕೆ ಚೈತನ್ಯ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

***************

ಮಧ್ಯಪ್ರಾಚ್ಯ ಯುದ್ಧದ ಬೆನ್ನಲ್ಲೇ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಟೊ ಎಲ್‌ಪಿಜಿ ಕೊರತೆ ಎದುರಾಗಿದ್ದು, ದರ ಕೂಡ ಭಾರೀ ಏರಿಕೆಯಾಗಿದೆ.
ವಾರದ ಹಿಂದಷ್ಟೇ 70ರಿಂದ 80 ರೂಪಾಯಿಯಷ್ಟಿದ್ದ ಇದ್ದ ಬೆಲೆ ಈಗ ಲೀಟರ್‌ಗೆ 92 ರೂಪಾಯಿ 10 ಪೈಸೆಗೆ ಏರಿಕೆಯಾಗಿದೆ.
ಯುದ್ಧ ಆರಂಭವಾಗುವ ಮೊದಲು ಆಟೊ ಎಲ್‌ಪಿಜಿ ದರ ಲೀಟರ್ ಗೆ 62 ರೂಪಾಯಿ ಇತ್ತು. ಯುದ್ಧ ಆರಂಭವಾದ ಬಳಿಕ 80 ರೂಪಾಯಿಗೆ ಏರಿಕೆಯಾಗಿತ್ತು. ಈಗ ದಿಢೀರನೆ ದರ ಏರಿಕೆ ಮಾಡಲಾಗಿದ್ದು, ಆಟೋ ಚಾಲಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಹಾವೇರಿ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಉದ್ಭವಿಸಬಹುದಾದ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಜಿಲ್ಲಾಡಳಿತ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. ಜಿಲ್ಲೆಯಲ್ಲಿ ಲಭ್ಯವಿರುವ ನೀರಿನ ಮೂಲಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದ್ದು, 576 ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಲಾಗಿದೆ.
ಜಿಲ್ಲೆಯ 6 ತಾಲೂಕಿನ 24 ಗ್ರಾಮಗಳಿಗೆ ಈಗಾಗಲೇ 31 ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಸಲಾಗುತ್ತಿದೆ. ಮುಂಬರುವ ದಿನಗಳಲ್ಲಿ ಅಗತ್ಯವಿದ್ದರೆ, ಇತರೆ ಗ್ರಾಮಗಳಲ್ಲಿಯೂ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

***************

ಕೇಂದ್ರ ಸರ್ಕಾರವು ಜನಗಣತಿ 2027ರ ಅಂಗವಾಗಿ ಸ್ವಯಂ ಗಣತಿ ವ್ಯವಸ್ಥೆ ಪರಿಚಯಿಸಿದ್ದು, ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ತಮ್ಮ ಮೊಬೈಲ್ ಮೂಲಕ ತಮ್ಮ ಸ್ವಯಂ ಗಣತಿ ದಾಖಲಾತಿಯನ್ನು ಪೂರ್ಣಗೊಳಿಸುವ ಮೂಲಕ ಜಿಲ್ಲೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ವಯಂ ಗಣತಿ ಮಾಡಿಕೊಳ್ಳಲು ಪ್ರೇರಣೆ ನೀಡಿದರು.

2026ರ ಏಪ್ರಿಲ್ 1 ರಿಂದ 15 ರವರೆಗೆ ಜಿಲ್ಲೆಯ ಎಲ್ಲಾ ನಾಗರಿಕರು ಅಧಿಕೃತ ಪೋರ್ಟಲ್ se.census.gov.in ಮೂಲಕ ತಮ್ಮ ಮಾಹಿತಿಯನ್ನು ಆನ್ಲೈನ್ ನಲ್ಲಿ ದಾಖಲಿಸಿಕೊಳ್ಳಬಹುದಾಗಿದೆ. ಈ ಪ್ರಕ್ರಿಯೆಯು ಅತ್ಯಂತ ಸರಳ ಮತ್ತು ಸುರಕ್ಷಿತವಾಗಿದೆ ಎಂದು ಅವರು ತಿಳಿಸಿದ್ದಾರೆ.

**ವಿಜಯಪುರ** ಜಿಲ್ಲೆಯಾದ್ಯಂತ ಮೊದಲ ಹಂತದ ಸ್ವಯಂ ಜನಗಣತಿ ಕಾರ್ಯಾರಂಭವಾಗಿದ್ದು, ಇದೇ 15 ರೊಳಗಾಗಿ ಪ್ರತಿಯೊಬ್ಬರೂ ತಮ್ಮ ಕುಟುಂಬದವರ ಸ್ವಯಂ ಗಣತಿಗೊಳಪಡಿಸುವ ಮೂಲಕ ಜನಗಣತಿ ಕಾರ್ಯ ಯಶಸ್ವಿಗೆ ಕೈ ಜೋಡಿಸುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

***************

ನಿವೃತ್ತ ಪೊಲೀಸ್ ಅಧಿಕಾರಿಗಳ ಮತ್ತು ಸಿಬ್ಬಂದಿಯ ಕರ್ತವ್ಯ, ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸಿಕೊಳ್ಳುವ ಸುದಿನವೇ ಪೊಲೀಸ್ ಧ್ವಜ ದಿನಾಚರಣೆ ಯಾಗಿದೆ ಎಂದು ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ ತಿಳಿಸಿದ್ದಾರೆ.

**ಗದಗ** ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ' ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಪೊಲೀಸ್ ಧ್ವಜ ದಿನಾಚರಣೆಯ ಉದ್ದೇಶ ಮತ್ತು ಮಹತ್ವವನ್ನು ವಿವರಿಸಿದರು.

**ಯಾದಗಿರಿ** ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ನಿವೃತ್ತ ಆರಕ್ಷಕ ಪೊಲೀಸ್ ಅಧಿಕ್ಷಕ ಅರುಣಕುಮಾರ್ ಕೊಳೂರ, ದಿನದ 24 ಗಂಟೆಗಳ ಒತ್ತಡದ ನಡುವೆಯೂ ಕಾರ್ಯ ನಿರ್ವಹಿಸುವ ಪೊಲೀಸರಿಗೆ ಕುಟುಂಬ ಸಮತೋಲನ ಹಾಗೂ ಆರೋಗ್ಯ ಕಾಪಾಡಿಕೊಳ್ಳುವುದು ಅತ್ಯಂತ ಮುಖ್ಯ ಎಂದು ತಿಳಿಸಿದ್ದಾರೆ.

***************

ಛತ್ತೀಸ್‌ಗಢದ ರಾಯ್‌ಪುರದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಆದಿವಾಸಿ ಕ್ರೀಡಾಕೂಟದ ಪದಕ ಪಟ್ಟಿಯಲ್ಲಿ ಕರ್ನಾಟಕ ಅಗ್ರಸ್ಥಾನ ಕಾಯ್ದುಕೊಂಡಿದೆ. ಇಂದು ಎರಡು ಚಿನ್ನದ ಪದಕದೊಂದಿಗೆ ಒಟ್ಟು 38 ಪದಕ ಗಳಿಸಿರುವ ರಾಜ್ಯ ತಂಡ ಅಗ್ರಸ್ಥಾನ ಕಾಯ್ದುಕೊಂಡಿದೆ. ಅಥ್ಲೆಟಿಕ್ಸ್‌ನಲ್ಲಿಂದು ರಾಜ್ಯದ ಅಥ್ಲೀಟ್‌ಗಳು 2 ಚಿನ್ನದ ಪದಕ ಗಳಿಸಿದ್ದಾರೆ.

ಇದುವರೆಗೆ ಒಟ್ಟು 23 ಚಿನ್ನ, 8 ಬೆಳ್ಳಿ, 7 ಕಂಚಿನ ಪದಕಗಳನ್ನು ಕರ್ನಾಟಕ ತನ್ನದಾಗಿಸಿಕೊಂಡಿದೆ.

*******ಮುಕ್ತಾಯ********